# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ಸಂಖ್ಯೆ-190, ಮಂಗಮ್ಮನಪಾಳ್ಯ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

ಮಾನ್ಯ ನೋಡಲ್ ಅಧಿಕಾರಿ/ಸ.ಕಾ.ನಿ.ಅ. (ಹೆಚ್.ಎಸ್.ಆರ್ ಉಪವಿಭಾಗ) ರವರು ದಿನಾಂಕ: 20.03.2021 ರಂದು ಬೆಳಿಗ್ಗೆ 11.30 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು 190-ಮಂಗಮ್ಮನಪಾಳ್ಯ, ವಾರ್ಡ್ ಕಛೇರಿ (ಹೆಚ್.ಎಸ್.ಆರ್ ಉಪವಿಭಾಗ) ರಲ್ಲಿ ನಡೆಸಿದ್ದ, ವಾರ್ಡ್ ಸಮಿತಿ ಸಭೆಯ ನಡುವಳಿಗಳು.

**ಸಭೆಯಲ್ಲಿ ಹಾಜರಿದ್ದ ಸದಸ್ಯರು/ಅಧಿಕಾರಿಗಳು**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ |
|---|---|---|
| 1 | ಶ್ರೀ ಹನುಮಂತರಾಯ ಟಿ. | ಅಧ್ಯಕರು/ ನೋಡಲ್ ಅಧಿಕಾರಿಗಳು |
| 2 | ಶ್ರೀಮತಿ ಲಕ್ಷ್ಮೀ ಬಿ | ಸ.ಕಂ.ಅ ಹೆಚ್.ಎಸ್.ಆರ್ ಉಪವಿಭಾಗ |
| 3 | ಶ್ರೀ ಸಾಯಿಬಣ್ಣ | ಸ.ಅ. ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 4 | ಶ್ರೀ ಹೊನ್ನೂರ ಬಾಷ್ | ಕಿರಿಯ ಆರೋಗ್ಯ ಪರಿವೀಕ್ಷಕರು |
| 5 | ಶ್ರೀ ವಿಜಯಕುಮಾರ್ | ಕಿರಿಯ ಅಭಿಯಂತರರು, ಬೆಸ್ಕಾಂ |
| 6 | ಶ್ರೀ ಅರುಣ ಕೆ. ಮುತ್ತಾಲಿಕ ದೇಸಾಯಿ | ಪಶುಪಾಲನೆ ಇಲಾಖೆ |
| 7 | ಶ್ರೀ ನಾಗೇಂದ್ರ | ಸದಸ್ಯರು |
| 8 | ಶ್ರೀ ಉಮೇಶ್ ಎಸ್. | ಸದಸ್ಯರು |
| 9 | ಶ್ರೀ ಚಂದ್ರ ರೆಡ್ಡಿ | ಸದಸ್ಯರು |
| 10 | ಶ್ರೀ ಸುರೇಶ್ ರೆಡ್ಡಿ | ಸದಸ್ಯರು |
| 11 | ಶ್ರೀ ಶಂಕರ್ ಎನ್ | ಸದಸ್ಯರು |
| 12 | ಶ್ರೀ ಗೋಪಿನಾಥ | ಸದಸ್ಯರು |

ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯಾದ ಶ್ರೀ ಟಿ ಹನುಮಂತರಾಯ ರವರು ಸಭೆಗೆ ಆಗಮಿಸಿದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಅಧ್ಯಕ್ಷರು ವಾರ್ಡ್ ಸಭೆಗೆ ಹಾಜರಾಗಿದ್ದ ಸದಸ್ಯರಿಗೆ ಮತ್ತು ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಪ್ರಸ್ತಾಪಿಸಲು ಕೋರಿದರು.

ಹಿಂದಿನ ಸಭಾ ನಡವಳಿಯ ಪ್ರತಿ ಅಂಶದ ಬಗ್ಗೆ ಚರ್ಚಿಸಿ, ಘನತ್ಯಾಜ್ಯ ನಿರ್ವಹಣೆ, ತೋಟಗಾರಿಕೆ, ವಿದ್ಯುತ್, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಬೆಸ್ಕಾಂ ಹಾಗೂ ಇಂಜಿಯರಿಂಗ್ ಎಲ್ಲಾ ಇಲಾಖೆಯು ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸಿ ಹಾಗೂ ಸಾರ್ವಜನಿಕರ ದೂರುಗಳಿಗೆ ಸ್ಪಂದಿಸಿ ಸುಧಾರಣೆ ತಂದಿರುವುದನ್ನು ಗಮನಿಸಿದ್ದು, ಇನ್ನು ಉತ್ತಮ ರೀತಿಯಲ್ಲಿ ಮುಂದುವರೆಸಲು ನೋಡಲ್ ಅಧಿಕಾರಿಯವರು ತಿಳಿಸಿದರು.

Scanned with Car

| ಕ್ರ ಸಂ | ಇಲಾಖೆ | ವಿಷಯ |
|---|---|---|
| 1 | ಘನತ್ಯಾಜ್ಯ (ಆರೋಗ್ಯ) ಇಲಾಖೆ | • ಹಿಂದಿನ ಸಭೆಯಲ್ಲಿ ತಿಳಿಸಿರುವ ವಿಷಯಗಳ ಬಗ್ಗೆ ಪ್ರಸ್ತಾಪಿಸಲಾಗಿದ್ದು ವಾರ್ಡ್ ವ್ಯಾಪ್ತಿಯಲ್ಲಿ ಫಾಸ್ಟ್ ಫುಡ್/ ಹೋಟೆಲ್ ಮತ್ತು ಬಾರ್ ರೆಸ್ಟೋರೆಂಟ್ ಮಾಲೀಕರಿಗೆ ನೋಟಿಸ್ ಜಾರಿ ಮಾಡಲಾಗಿದೆ ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿರುತ್ತಾರೆ. ಹಾಗೂ ಕರೆದಿರುವ ಎಣ್ಣೆಯಲ್ಲಿ ಪದಾರ್ಥವನ್ನು ತಯಾರಿಸದಂತೆ ಎಚ್ಚರಿಕೆ ನೀಡಲಾಗಿದೆ.<br>• ವಾರ್ಡ್ ವ್ಯಾಪ್ತಿಯಲ್ಲಿ ಪರವಾನಗಿ ಇಲ್ಲದೆ ಇರುವ ಮಾಂಸದ ಅಂಗಡಿಗಳಿಗೆ ಪರವಾನಗಿಗಳನ್ನು ಪಡೆಯುವಂತೆ ಒಂದು ವಾರದ ಕಾಲಾವಕಾಶ ನೀಡಲು ಸದಸ್ಯರು ಕೋರಿರುತ್ತಾರೆ. ಈ ಬಗ್ಗೆ ಕ್ರಮ ವಹಿಸುವಂತೆ ಅಧ್ಯಕ್ಷರು ಸೂಚಿಸಿರುತ್ತಾರೆ.<br>**ಕ್ರಮ : ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು.** |
| 2 | ಬಿ.ಡಬ್ಲ್ಯೂ.ಎಸ್.ಎಸ್.ಬಿ | • ವಾರ್ಡ್ ವ್ಯಾಪ್ತಿಯ ಇಂದಿರ ಕ್ಯಾಂಟಿನ್ ರಸ್ತೆಯಲ್ಲಿ ಮಣ್ಣು ತುಂಬಿಕೊಂಡಿದ್ದು, ಮಣ್ಣನ್ನು ಮಟ್ಟ ಮಾಡಿ, ವೆಟ್‌ಮಿಕ್ಸ್ ಹಾಕುವಂತೆ ಸದಸ್ಯರು ಸಭೆಯಲ್ಲಿ ಕೋರಿರುತ್ತಾರೆ.<br>• ಮಂಗಮ್ಮನಪಾಳ್ಯ ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ವ್ಯವಸ್ಥೆಯನ್ನು ವಾರಕ್ಕೆ ಎರಡು ಬಾರಿ/ ದಿನಕ್ಕೆ 8 ಗಂಟೆ ಒದಗಿಸುವಂತೆ ಸದಸ್ಯರು ಕೋರಿರುತ್ತಾರೆ.<br>• ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿರುವ ವಿಷಯಗಳ ಬಗ್ಗೆ ಚರ್ಚಿಸಿರುವಂತೆ ಕುಡಿಯುವ ನೀರಿನ ಮೀಟರ್ ಅಳವಡಿಸಿಕೊಳ್ಳದೆ ಅನಧಿಕೃತವಾಗಿ ನೀರಿನ ಸಂಪರ್ಕವನ್ನು ಕಲ್ಪಿಸಿಕೊಂಡಿರುವ ಒಟ್ಟು 127 ಮನೆಗಳಿಗೆ ನೋಟಿಸ್ ಜಾರಿ ಮಾಡಿ, ಸಂಪರ್ಕವನ್ನು ಕಡಿತಗೊಳಿಸಲಾಗಿದೆ ಎಂದು ಸಭೆಯಲ್ಲಿ ಹಾಜರಿದ್ದ ಸ.ಅ. ರವರು ಮುಂದಿನ ಸಭೆಯಲ್ಲಿ ಸದರಿ ನೋಟಿಸ್ ಪ್ರತಿಯನ್ನು ಸಲ್ಲಿಸಲಾಗುವುದೆಂದು ತಿಳಿಸಿರುತ್ತಾರೆ.<br>**ಕ್ರಮ : ಸ.ಅ. ಬಿ.ಡಬ್ಲ್ಯೂ.ಎಸ್.ಎಸ್.ಬಿ** |
| 3 | ಕಂದಾಯ ವಿಭಾಗ | • ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿರುವ ವಿಷಯಗಳ ಬಗ್ಗೆ ಚರ್ಚಿಸಿರುವಂತೆ ವಾರ್ಡ್ ವ್ಯಾಪ್ತಿಯ ಮಂಗಮ್ಮನಪಾಳ್ಯ ಕೆರೆಯ ಸರ್ವೆ ಸಂಖ್ಯೆ: 19 ರಲ್ಲಿ 7 ಎಕರೆ 29 ಗುಂಟೆ ಜಾಗವಿದ್ದು, ಕೆರೆಯ ಜಾಗದಲ್ಲಿ ಅನಧಿಕೃತವಾಗಿ ಕಟ್ಟಡ ನಿರ್ಮಿಸಿದ್ದು, ಈ ನಿವೇಶನದ ಖಾತ, ಅಭಿವೃದ್ಧಿ ಶುಲ್ಕ, ಡಿ.ಸಿ. ಕನ್ವರ್ಷನ್ ಇತ್ಯಾದಿ ದಾಖಲಾತಿಗಳನ್ನು ಪರಿಶೀಲಿಸಿ ಕ್ರಮ ವಹಿಸುವಂತೆ ಸದಸ್ಯರು ಕೋರಿರುತ್ತಾರೆ.<br>ಈ ಬಗ್ಗೆ ಕ್ರಮ ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಅಧ್ಯಕ್ಷರು ಸೂಚಿಸಿರುತ್ತಾರೆ.<br>**ಕ್ರಮ : ಸ.ಕ.ಅ. ಹೆಚ್.ಎಸ್.ಆರ್ ಉಪವಿಭಾಗ** |
| 4 | ವಿದ್ಯುತ್ ವಿಭಾಗ | ವಾರ್ಡ್ ವ್ಯಾಪ್ತಿಯಲ್ಲಿ ಹಾಲಿ ಇರುವ ಬೀದಿ ದೀಪಗಳನ್ನು ತೆರವುಗೊಳಿಸಿ ಹೊಸದಾಗಿ ಎಲ್.ಇ.ಡಿ. ದೀಪಗಳನ್ನು ಅಳವಡಿಸುವಂತೆ ಸದಸ್ಯರು ಕೋರಿರುತ್ತಾರೆ.<br>ಈ ಬಗ್ಗೆ ಕ್ರಮ ವಹಿಸುವಂತೆ ಅಧ್ಯಕ್ಷರು ಸೂಚಿಸಿರುತ್ತಾರೆ.<br>**ಕ್ರಮ : ಸಹಾಯಕ ಅಭಿಯಂತರರು, ವಿದ್ಯುತ್ ವಿಭಾಗ** |

Scanned with Car

| | | |
|---|---|---|
| 5 | ಬೆಸ್ಕಾಂ | • ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿರುವ ವಿಷಯಗಳ ಬಗ್ಗೆ ಚರ್ಚಿಸಿರುವಂತೆ ನಂಜುಡಪ್ಪ ಬಡಾವಣೆಯ 4ನೇ ಮುಖ್ಯ ರಸ್ತೆಯಲ್ಲಿ ಇರುವ ವಿದ್ಯುತ್ ಕಂಬಗಳನ್ನು ರಸ್ತೆ ಅಡ್ಡಲಾಗಿರುವುದರಿಂದ ಸಾರ್ವಜನಿಕ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿದ್ದು ಇದರಿಂದ ರಸ್ತೆಗೆ ಅಡ್ಡಲಾಗಿರುವ ಕಂಬಗಳನ್ನು ಸ್ಥಳಾಂತರ ಮಾಡುವಂತೆ ಸದಸ್ಯರು ಕೋರಿರುತ್ತಾರೆ.<br>• ಹೊಸಪಾಳ್ಯ ಸ್ಮಶಾನ ರಸ್ತೆಯಲ್ಲಿ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಅನು ಬದಲಾಯಿಸಲು ಸದಸ್ಯರು ಕೋರಿರುತ್ತಾರೆ. ಬದಲಾಯಿಸಲಾಗಿದೆ ಎಂದು ಸಹಯಕ ಅಭಿಯಂತರರು ರವರು ತಿಳಿಸಿರುತ್ತಾರೆ.<br>ಈ ಬಗ್ಗೆ ಕ್ರಮ ವಹಿಸಲು ಅಧ್ಯಕ್ಷರು ಸೂಚಿಸಿರುತ್ತಾರೆ.<br>ಕ್ರಮ : ಸ.ಅ. ಬೆಸ್ಕಾಂ |
| 6 | ಕಾಮಗಾರಿ | • ವಾರ್ಡ್ ವ್ಯಾಪ್ತಿಯ ಸೋಮಸುಂದರಪಾಳ್ಯ, ಚಿನ್ಮಯಿ ಶಾಲೆಯ ಹಿಂಭಾಗ ಹಾಳಾಗಿರುವ ರಸ್ತೆಗೆ, ಕಾಂಕ್ರೀಟ್ ರಸ್ತೆ ಮಾಡುವಂತೆ ಸದಸ್ಯರು ಕೋರಿರುತ್ತಾರೆ.<br>• ಹೊಸಪಾಳ್ಯ ಅಡ್ಡ ರಸ್ತೆಯಲ್ಲಿ ಚರಂಡಿ ಮತ್ತು ಕಲ್ವರ್ಟ್ ನಿರ್ಮಾಣ ಮಾಡುವಂತೆ ಸದಸ್ಯರು ಕೋರಿರುತ್ತಾರೆ.<br>• ಹೊಸಪಾಳ್ಯ ಬಸ್ ನಿಲ್ದಾಣದಲ್ಲಿ ಸಾರ್ವಜನಿಕ ಶೌಚಾಲಯವನ್ನು ನಿರ್ಮಾಣ ಮಾಡುವಂತೆ ಸದಸ್ಯರು ಕೋರಿರುತ್ತಾರೆ. ಈ ಬಗ್ಗೆ ಕ್ರಮ ವಹಿಸುವಂತೆ ಅಧ್ಯಕ್ಷರು ಸೂಚಿಸಿರುತ್ತಾರೆ.<br>**ಕ್ರಮ: ಸಹಾಯಕ ಅಭಿಯಂತರರು, ವಾರ್ಡ್ ನಂ. 190** |

Communitiy Task Force ರವರು ಸಾರ್ವಜನಿಕರ ಹಿತದೃಷ್ಟಿಯಿಂದ ಕೆಲವು ಕುಂದುಕೊರತೆಗಳ ಬಗ್ಗೆ ಮನವಿ ಸಲ್ಲಿಸಿ ಈ ಕೆಳಕಂಡ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

1. ಪ್ರಾಥಮಿಕ ಆರೋಗ್ಯ ಕೇಂದ್ರ, ಮಂಗಮ್ಮನಪಾಳ್ಯದಲ್ಲಿ ಸ್ಥಾಪಿಸುವಂತೆ.
2. ಕುಡಿಯುವ ನೀರಿನ ಶುದ್ಧೀಕರಣ ಮತ್ತು ಟೆಸ್ಟಿಂಗ್ ಬಗ್ಗೆ.
3. ಕೆರೆ ವಿಭಾಗಕ್ಕೆ ಸಂಬಂಧಿಸಿದ ಸಮಸ್ಯೆ.
4. ಉದ್ಯಾನವನಗಳ ನಿರ್ವಹಣೆ, ಆಟದ ಉಪಕರಣಗಳು ಹಾಗೂ ಜಿಮ್ ಉಪಕರಣಗಳ ಅವಳಡಿಸುವ ಬಗ್ಗೆ.
5. ಪಾದಚಾರಿ ಮಾರ್ಗ ತೆರವುಗೊಳಿಸುವ ಬಗ್ಗೆ.
6. ಬೀದಿ ದೀಪಗಳ ನಿರ್ವಹಣೆ ಬಗ್ಗೆ.
7. ಸಾರ್ವಜನಿಕ ಶೌಚಾಲಯ ಸ್ಥಾಪಿಸುವ ಬಗ್ಗೆ.
8. ಗಿಡ/ಮರ ನೆಡುವ ಬಗ್ಗೆ.
9. ಕೆ.ಸಿ.ಡಿ.ಸಿ ನಿರ್ವಹಣೆ ಬಗ್ಗೆ.
10. ಘನತ್ಯಾಜ್ಯ ನಿರ್ವಹಣೆ ಬಗ್ಗೆ.

ಮುಂತಾದ ಸಮಸ್ಯೆಗಳನ್ನು ಸಭೆಯಲ್ಲಿ ಪ್ರಸ್ಥಾಪಿಸಲಾಗಿದ್ದು, ಹಾಗೂ ಮೇಲಿನ ವಿಷಯಗಳಿಗೆ ಸಂಬಂಧಿಸಿದಂತೆ, ಸಂಬಂದಪಟ್ಟ ಇಲಾಖೆಗಳಿಗೆ ಮನವಿ ಪತ್ರವನ್ನು ರವಾನಿಸಿ ಕ್ರಮ ಕೈಗೊಳ್ಳುವಂತೆ ಅಧ್ಯಕ್ಷರು ಸೂಚಿಸಿರುತ್ತಾರೆ.

Scanned with Car

ಈ ಮೇಲಿನ ಎಲ್ಲಾ ವಿಷಯಗಳಿಗೆ ಸಂಬಂಧಪಟ್ಟಂತೆ ಕೂಲಂಕುಷವಾಗಿ ಚರ್ಚಿಸಿ, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿದ್ದ ಎಲ್ಲಾ ಅಧಿಕಾರಿಗಳಿಗೆ ಸೂಚಿಸಿ, ಸಭೆಯನ್ನು ವಂದಾನಾರ್ಪಣೆಯೊಂದಿಗೆ ಮುಕ್ತಾಯಗೊಳಿಸಲಾಯಿತ್ತು.

Lakshmi
ಕಾರ್ಯದರ್ಶಿಗಳು
ವಾರ್ಡ್ ನಂ. 190

ಅಧ್ಯಕ್ಷರು/ ನೋಡಲ್ ಅಧಿಕಾರಿಗಳು
ವಾರ್ಡ್ ನಂ. 190

**ಪ್ರತಿಯನ್ನು:–**

1. ಮಾನ್ಯ ಆಡಳಿತಗಾರರು, ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ
2. ವಿಶೇಷ ಆಯುಕ್ತರು, (ಆಡಳಿತ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮನ್ಯ ವಲಯ ಆಯಕ್ತರು, ಬೊಮ್ಮನಹಳ್ಳಿ ವಲಯ ರವರ ಅವಗಾಹನೆಗಾಗಿ ಸಲ್ಲಿಸಿದೆ
4. ಜಂಟಿ ಆಯುಕ್ತರು (ಬೊಮ್ಮನಹಳ್ಳಿ ವಲಯ) ರವರ ಅವಗಾಹನೆಗಾಗಿ ಸಲ್ಲಿಸಿದೆ
5. ವಾರ್ಡ್ ಸಮಿತಿಯ ಸದಸ್ಯರ ಮಾಹಿತಿಗಾಗಿ ಸಲ್ಲಿಸಿದೆ.
6. ಕಛೇರಿ ಪ್ರತಿ.

Scanned with Car